Akashvani : Bangalore
Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

23.07.2024 18.40 hrs

<><*<><>*><>

- ೧. ಕೇಂದ್ರ ಆಯವ್ಯಯ ಮಂಡನೆ ; ಸ್ಟ್ಯಾಂಪ್ ಡ್ಯೂಟಿ ಹೆಚ್ಚಳಕ್ಕೆ ರಾಜ್ಯ ಸರ್ಕಾರಗಳಿಗೆ ಅವಕಾಶ ; ಮೂರು ಲಕ್ಷವರೆಗಿನ ಆದಾಯಕ್ಕೆ ತೆರಿಗೆ ವಿನಾಯಿತಿ

- ೨. ರಾಜ್ಯದ ನಿರೀಕ್ಷೆ ಸುಳ್ಳಾಗಿದೆ - ಕೇಂದ್ರ ಬಜೆಟ್‌ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಸಮಾಧಾನ

- ೩. ಕೃಷ್ಣ ಜಲಭಾಗ್ಯ ನಿಗಮದಲ್ಲಿ ಅವ್ಯವಹಾರ ; ತನಿಖೆಗೆ ತಂಡ ರಚನೆ - ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್

- ೪. ರಾಜ್ಯದಲ್ಲಿ ಸೆಮಿ ಕಂಡಕ್ಟರ್ ಸ್ಥಾಪಿಸುವ ಉದ್ಯಮಗಳಿಗೆ ಸರ್ಕಾರದಿಂದ ಸಹಾಯ ಧನ - ಸಚಿವ ಪ್ರಿಯಾಂಕ್ ಖರ್ಗೆ

<><*<><>*><>

ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಲೋಕಸಭೆಯಲ್ಲಿಂದು ದಾಖಲೆಯ ೭ನೇ ಬಜೆಟ್ ಮಂಡಿಸಿದ್ದಾರೆ. ಪಿಎಂ ಆವಾಸ್ ಯೋಜನೆಯಡಿ ಕೇಂದ್ರ ಸರ್ಕಾರ ೩ ಕೋಟಿ ಮನೆಗಳ ನಿರ್ಮಾಣ ಗುರಿ ಹೊಂದಿದ್ದು ನಗರ, ಗ್ರಾಮಾಂತರ ಪ್ರದೇಶದಲ್ಲಿ ೩ ಕೋಟಿ ಮನೆಗಳ ನಿರ್ಮಾಣದ ಘೋಷಣೆ ಮಾಡಿದ್ದಾರೆ. ಗ್ರಾಮೀಣಾಭಿವೃದ್ಧಿಗೆ ೨ ಲಕ್ಷ ೬೬ ಸಾವಿರ ಕೋಟಿ ರೂಪಾಯಿ ಮೀಸಲಿಟ್ಟಿದ್ದು, ೨೬ ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ರೈಲು ಯೋಜನೆಗಳ ಆರಂಭ ಮಾಡುವುದಾಗಿ ಹೇಳಿದ್ದಾರೆ. ಕ್ಯಾನ್ಸರ್ ಔಷಧಿಗಳು ಇನ್ನಷ್ಟು ಅಗ್ಗವಾಗಲಿದ್ದು ಕಸ್ಟಮ್ಸ್ ದರ ಇಳಿಕೆ ಮಾಡುವ ಜೊತೆಗೆ ಮೂರು ಕ್ಯಾನ್ಸರ್ ಔಷಧಿಗಳ ತೆರಿಗೆ ರದ್ದುಗೊಳಿಸಿದೆ. ಎಕ್ಸರೇ ಟ್ಯೂಬ್ ಮತ್ತು ಫ್ಲಾಟ್ ಪ್ಯಾನಲ್ ಡಿಟೆಕ್ಟರ್ ಮೇಲಿನ ಆಮದು ಸುಂಕವನ್ನು ತೆಗೆದುಹಾಕಲಾಗಿದೆ. ಮೊಬೈಲ್ ಫೋನ್‌ಗಳ ಮೇಲಿನ ತೆರಿಗೆ ಶೇಕಡ ೧೫ರಷ್ಟು ಇಳಿಕೆಯಾಗಿದ್ದು ಮೊಬೈಲ್, ಚಾರ್ಜರ್ ದರ ಇನ್ನಷ್ಟು ಅಗ್ಗವಾಗಲಿದೆ. ಚಿನ್ನ, ಬೆಳ್ಳಿ ಮೇಲಿನ ಶೇಕಡ ೬ರಷ್ಟು ಕಸ್ಟಮ್ಸ್ ಸುಂಕವನ್ನು ಕಡಿತ ಮಾಡಲಾಗಿದೆ ಎಂದು ನಿರ್ಮಲಾ ಸೀತರಾಮನ್ ಪ್ರಸ್ತಾಪಿಸಿದ್ದಾರೆ. ವಿದೇಶಿ ಬಟ್ಟೆ, ಚರ್ಮ ಉತ್ಪನ್ನಗಳು ಟಿ.ವಿ. ಅಗ್ಗವಾಗಲಿದೆ. ಇ-ಕಾಮರ್ಸ್ ಮೇಲಿನ ಟಿಡಿಎಸ್ ಶೇಕಡ ೧ ರಿಂದ ೦.೧ಕ್ಕೆ ಇಳಿಕೆ ಆಗಿದೆ. ಪ್ಲಾಸ್ಟಿಕ್ ಮೇಲಿನ ಆಮದು ಸುಂಕವನ್ನು ಏರಿಸಲಾಗಿದ್ದು, ಸ್ಟ್ಯಾಂಪ್ ಡ್ಯೂಟಿ ಹೆಚ್ಚಳಕ್ಕೆ ರಾಜ್ಯ ಸರ್ಕಾರಗಳಿಗೆ ಅವಕಾಶ ಕಲ್ಪಿಸಲಾಗಿದೆ. ಸಣ್ಣ ಮತ್ತು ಮಧ್ಯಮ ಉದ್ಯಮಿಗಳಿಗೆ ಹೆಚ್ಚುವರಿ ಆಧಾರ ಮತ್ತು ಖಾತರಿಗಳಿಲ್ಲದೆಯೇ ಅವಧಿ ಸಾಲಗಳನ್ನು ಸರಳ ಮತ್ತು ಸುಲಭಗೊಳಿಸಲು ಕ್ರೆಡಿಟ್ ಗ್ಯಾರಂಟಿ ಯೋಜನೆಯನ್ನು ವಿತ್ತ ಸಚಿವರು ಪ್ರಕಟಿಸಿದ್ದಾರೆ. ಮುದ್ರಾ ಯೋಜನೆಯಡಿ ಸಾಲದ ಮಿತಿ ೧೦ ಲಕ್ಷದಿಂದ ೨೦ ಲಕ್ಷಕ್ಕೆ ಏರಿಕೆ ಮಾಡಲಾಗಿದೆ. ಇದರಿಂದ ಕೋಳಿ ಸಾಕಾಣಿಕೆ, ಹೈನುಗಾರಿಕೆ ಸೇರಿದಂತೆ ಸಣ್ಣಪುಟ್ಟ ಉದ್ಯಮಿಗಳಿಗೆ ಉಪಯೋಗವಾಗಲಿದೆ. ಈ ಕುರಿತಂತೆ ಎನ್. ರಂಗರಾವ್ ಅಂಡ್ ಸನ್ಸ್, ಸಂಸ್ಥೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮಾವತ್ತೂರು ಸುರೇಶ್ ಆಕಾಶವಾಣಿಯೊಂದಿಗೆ ಮಾತನಾಡಿ ಕೇಂದ್ರ ಸರ್ಕಾರದ ನಿರ್ಧಾರವನ್ನು ಸ್ವಾಗತಿಸಿದ್ದಾರೆ.

<><*<><>*><>

ಈ ಬಾರಿಯ ಬಜೆಟ್ ನಲ್ಲಿ ಹೊಸ ಆದಾಯ ತೆರಿಗೆ ನೀತಿ ಘೋಷಿಸಿದ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ೩ ಲಕ್ಷ ಆದಾಯಕ್ಕೆ ಯಾವುದೇ ತೆರಿಗೆ ಇಲ್ಲ ಎಂದು ತಿಳಿಸಿದ್ದಾರೆ. ೩ ರಿಂದ ೭ ಲಕ್ಷ ಆದಾಯಕ್ಕೆ ಶೇಕಡ ಐದು, ೭ ರಿಂದ ೧೦ ಲಕ್ಷ ಆದಾಯಕ್ಕೆ ಶೇಕಡ ಹತ್ತು, ೧೦ ರಿಂದ ೧೨ ಲಕ್ಷದವರೆಗೆ,

ಶೇಕಡ ೧೨ರಷ್ಟು ೧೨ ರಿಂದ ೧೫ ಲಕ್ಷ ಆದಾಯಕ್ಕೆ ಶೇಕಡ ೨೦ರಷ್ಟು ತೆರಿಗೆ ಘೋಷಿಸಿದ್ದಾರೆ. ೧೫ ಲಕ್ಷಕ್ಕಿಂತ ಅಧಿಕ ಆದಾಯಕ್ಕೆ ಶೇಕಡ ೩೦ರಷ್ಟು ತೆರಿಗೆ ವಿಧಿಸಲಾಗುವುದು ಎಂದು ತಿಳಿಸಿದ್ದಾರೆ. ಟಿಡಿಎಸ್ ಕಟ್ಟುವುದು ತಡವಾದರೆ ದಂಡ ಹಾಕುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಸರ್ಕಾರದ ಹೊಸ ತೆರಿಗೆ ನೀತಿಯನ್ನು ಲೆಕ್ಕ ಪರಿಶೋಧಕರಾದ ಕೃಷ್ಣ ದೇಶ್‌ಪಾಂಡೆ ಸ್ವಾಗತಿಸಿದ್ದಾರೆ.

<><*<><>*><>

ಕೇಂದ್ರ ಬಜೆಟ್ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಆಂಧ್ರ ಮತ್ತು ಬಿಹಾರಕ್ಕೆ ವಿಶೇಷ ಅನುದಾನ ನೀಡಿದ್ದು, ರಾಜ್ಯದ ನಿರೀಕ್ಷೆ ಸುಳ್ಳು ಮಾಡಲಾಗಿದೆ ಎಂದು ಟೀಕಿಸಿದ್ದಾರೆ. ರಾಜ್ಯದ ನೀಡಿದ ಬೇಡಿಕೆಗಳು ಮತ್ತು ಕೇಂದ್ರ ಸರ್ಕಾರ ಕೊಟ್ಟ ಭರವಸೆಗಳು ಎರಡನ್ನೂ ಈಡೇರಿಸಿಲ್ಲ ಎಂದು ಆರೋಪಿಸಿದರು. ಈ ಬಜೆಟ್‌ನಲ್ಲಿ ರೈತರಿಗೆ ಅನ್ಯಾಯವಾಗಿದ್ದು, ಶಿಕ್ಷಣ ಆರೋಗ್ಯ ರಕ್ಷಣಾ ಕ್ಷೇತ್ರಗಳ ಅನುದಾನವನ್ನು ಕಡಿತಗೊಳಿಸಲಾಗಿದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಅಲ್ಪ ಸಂಖ್ಯಾತರ ಅಭಿವೃದ್ಧಿಗೆ ಮೀಸಲಿಟ್ಟಿದ್ದ ಅನುದಾನವನ್ನು ಕಡಿತಗೊಳಿಸಲಾಗಿದೆ ಎಂದು ದೂರಿದ್ದಾರೆ. ದಕ್ಷಿಣ ಭಾರತದಲ್ಲಿ ಆಂಧ್ರ ಹೊರತುಪಡಿಸಿ ಉಳಿದ ಯಾವ ರಾಜ್ಯಗಳಿಗೂ ಅನುದಾನ ಸಿಕ್ಕಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

<><*<><>*><>

ಇಂದು ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಮಂಡಿಸಿದ ಬಜೆಟ್‌ಗೆ ಪರ-ವಿರೋಧ ವ್ಯಕ್ತವಾಗಿದೆ. ಕೇಂದ್ರ ಸಚಿವ ಕುಮಾರಸ್ವಾಮಿ ಅಭಿನಂದನೆ ಸಲ್ಲಿಸಿದ್ದು, ನರೇಂದ್ರ ಮೋದಿ ಅವರ ಕನಸಿನ ವಿಕಸಿತ ಭಾರತ ನಿರ್ಮಾಣಕ್ಕೆ ಶಕ್ತಿ ತುಂಬುವ, ಮಹಿಳೆಯರಿಗೆ ಅತಿಹೆಚ್ಚು ಅನುಕೂಲ ಮಾಡಿಕೊಡುವ ನಾರಿಶಕ್ತಿ ಬಜೆಟ್ ಇದಾಗಿದೆ ಎಂದು ಬಣ್ಣಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರ ರೈತ ಸ್ನೇಹಿ ತೆರಿಗೆ ಹೊರೆ ರಹಿತ ಸುಭದ್ರ ಬಜೆಟ್ ನೀಡಿದೆ ಎಂದು ಪ್ರತಿಪಕ್ಷ ನಾಯಕ ಅಶೋಕ ಶ್ಲಾಘಿಸಿದ್ದಾರೆ. ನಿರ್ಮಲಾ ಸೀತಾರಾಮನ್ ಎನ್‌ಡಿಎ ಸರ್ಕಾರ ಉಳಿಸಿಕೊಳ್ಳುವ ಬಜೆಟ್ ಮಂಡಿಸಿದ್ದಾರೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವ್ಯಂಗ್ಯವಾಡಿದ್ದಾರೆ. ಈ ಬಜೆಟ್‌ಗೆ ಕಾಂಗ್ರೆಸ್ ಪ್ರಣಾಳಿಕೆಯೇ ಸ್ಫೂರ್ತಿ ಎಂದು ಅರಣ್ಯ ಸಚಿವ ಈಶ್ವರ್ ಬಿ ಖಂಡ್ರೆ ತಿಳಿಸಿದ್ದಾರೆ.

<><*<><>*><>

ರಾಜ್ಯ ಸರ್ಕಾರದ ವಿರುದ್ಧ ಕಲ್ಯಾಣ ಕರ್ನಾಟಕ ಬಿಜೆಪಿ ಶಾಸಕರು ರಾಜ್ಯಪಾಲರಿಗೆ ದೂರು ನೀಡಿದ್ದಾರೆ. ಕಲ್ಯಾಣ ಕರ್ನಾಟಕಕ್ಕೆ ಸರ್ಕಾರ ೫ ಸಾವಿರ ಕೋಟಿ ಅನುದಾನ ಘೋಷಿಸಿದೆ.  ಇದರಲ್ಲಿ ೩ ಸಾವಿರ ಕೋಟಿ ಕಾಂಗ್ರೆಸ್ ಶಾಸಕರಿಗೆ ಅನುದಾನ ನೀಡಲಾಗಿದ್ದು, ಬಿಜೆಪಿ ಮತ್ತು ಜೆಡಿಎಸ್ ಶಾಸಕರಿಗೆ ತಾರತಮ್ಯವಾಗುತ್ತಿದೆ. ಇದರಿಂದಾಗಿ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಕುಂಠಿತವಾಗಿದೆ ಎಂದು ದೂರಿನಲ್ಲಿ ತಿಳಿಸಿದ್ದಾರೆ.

<><*<><>*><>

ಕೃಷ್ಣ ಜಲಭಾಗ್ಯ ನಿಗಮದಲ್ಲಿ ಪರಿಹಾರ ಕೊಡಿಸುವ ನೆಪದಲ್ಲಿ ಅಕ್ರಮ ನಡೆದಿದ್ದು, ರೈತರನ್ನು ಉಳಿಸಲು ತನಿಖಾ ತಂಡ ರಚಿಸಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಕೃಷ್ಣ ಜಲಭಾಗ್ಯ ನಿಗಮದ ಅಡಿ ಸಮರ್ಪಕವಾದ ನೀರಾವರಿ ಕೆಲಸಗಳು ನಡೆಯುತ್ತಿಲ್ಲ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಎಂಬ ಪ್ರಶ್ನೆಗೆ ವಿಧಾನಸಭೆಯಲ್ಲಿ ಪ್ರಶ್ನೋತ್ತರ ವೇಳೆ ಉತ್ತರಿಸಿದ ಅವರು, ನ್ಯಾಯಾಲಯದಲ್ಲಿ ಭೂಸ್ವಾಧೀನ ಕುರಿತು ವಿಚಾರಣೆ ನಡೆಯುತ್ತಿದೆ. ಈ ಬಗ್ಗೆ ಕಾನೂನು ಸಚಿವರ ಬಳಿ ಚರ್ಚೆ ನಡೆಸಲಾಗುವುದು ಎಂದು ತಿಳಿಸಿದರು. ಯೋಜನೆ ಬಗ್ಗೆ ಪುನರ್ ಪರಿಶೀಲನೆ ನಡೆಸಿದಾಗ ಅವ್ಯವಹಾರ ಬಯಲಿಗೆ ಬಂದಿದೆ ಎಂದು ತಿಳಿಸಿದರು.

<><*<><>*><>

ಎತ್ತಿನಹೊಳೆ ಯೋಜನೆ ಪ್ರಗತಿಯಲ್ಲಿದ್ದು, ಈ ಮೂಲಕ ಬಯಲುಸೀಮೆ ಜಿಲ್ಲೆಗಳಿಗೆ ನೀರುಣಿಸುವ ಉದ್ದೇಶ ಹೊಂದಲಾಗಿದೆ ಎಂದು ಜಲಸಂಪನ್ಮೂಲ ಸಚಿವರೂ ಆಗಿರುವ  ಉಪಮುಖ್ಯಮಂತ್ರಿ ಡಿ.ಕೆ.

ಶಿವಕುಮಾರ್ ವಿಧಾನಸಭೆಯಲ್ಲಿ ತಿಳಿಸಿದ್ದಾರೆ. ವಿಧಾನಸಭೆಯ ಪ್ರಶ್ನೋತ್ತರ ಕಲಾಪದಲ್ಲಿ ಮಾತನಾಡಿದ ಅವರು, ಈ ಯೋಜನೆಯ ಪರಿಷ್ಕೃತ ಅಂದಾಜುವೆಚ್ಚ ೨೩ ಸಾವಿರ ಕೋಟಿ ರೂಪಾಯಿಗೂ ಹೆಚ್ಚಾಗಿದ್ದು, ಈ ಯೋಜನೆಯಡಿ ಬೆಂಗಳೂರಿನ ಹೆಸರಘಟ್ಟ ಕೆರೆಗೆ ನೀರು ಪೂರೈಕೆ ಮಾಡುವ ಉದ್ದೇಶ ಹೊಂದಲಾಗಿದೆ ಎಂದರು. ಎತ್ತಿನಹೊಳೆ ಯೋಜನೆಯ ಜಾರಿ ಕುರಿತು ಬಿಜೆಪಿಯ ಎಸ್.ಆರ್. ವಿಶ್ವನಾಥ್, ಸುರೇಶ್ ಗೌಡ ಮತ್ತಿತರರು ಯೋಜನೆಯ ಕಾರ್ಯಪ್ರಗತಿ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಅಧಿವೇಶನದ ನಂತರ ವಿಶ್ವನಾಥ್ ಸೇರಿದಂತೆ ಇತರೆ ಶಾಸಕರೊಂದಿಗೆ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಲಾಗುವುದು ಎಂದು ಭರವಸೆ ನೀಡಿದರು.

<><*<><>*><>

ರಾಜ್ಯದ ಜನರಿಗೆ ಶುದ್ಧ ಕುಡಿಯುವ ನೀರು ಪೂರೈಕೆ ಸರ್ಕಾರದ ಜವಾಬ್ದಾರಿಯಾಗಿದ್ದು ಆ ನಿಟ್ಟಿನಲ್ಲಿ ಕಾರ್ಯನಿರ್ವಹಿಸಲಾಗುತ್ತಿದೆ ಎಂದು ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ತಿಳಿಸಿದ್ದಾರೆ. ರಾಜ್ಯದಲ್ಲಿ ಕುಡಿಯುವ ನೀರು ಶುದ್ಧವಾಗಿಲ್ಲ ಎಂದು ಬಿಜೆಪಿ ಸದಸ್ಯ ಡಿ.ಎಸ್.ಅರುಣ್ ಬಾಟಲಿಯಲ್ಲಿ ನೀರು ತಂದು ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಪ್ರದರ್ಶಿಸಿದರು. ಗ್ರೇಟರ್ ಬೆಂಗಳೂರು ಎಂದು ಕರೆಯಲು ಹೊರಟಿರುವ ಬೆಂಗಳೂರಿನಲ್ಲೇ ಈ ರೀತಿ ನೀರು ಪೂರೈಕೆ ಮಾಡಲಾಗುತ್ತಿದೆ ಇನ್ನು ರಾಜ್ಯದ ಇತರ ನಗರದಲ್ಲಿ ಪರಿಸ್ಥಿತಿ ಹೇಗಿರಬಹುದು ಎಂದು ಕಳವಳ ವ್ಯಕ್ತಪಡಿಸಿದರು. ಇದಕ್ಕೆ ಉತ್ತರಿಸಿದ ಸಚಿವ ಬೈರತಿ ಸುರೇಶ್, ಈಗ ಲ್ಯಾಬ್‌ನಲ್ಲಿ ಪರಿಶೀಲಿಸಿಯೇ ನೀರು ಪೂರೈಕೆ ಮಾಡಲಾಗುತ್ತಿದೆ ಎಂದು ತಿಳಿಸಿದರು.

<><*<><>*><>

ರಾಜ್ಯದಲ್ಲಿ ಸೆಮಿಕಂಡಕ್ಟರ್ ಸ್ಥಾಪಿಸಲು ಉದ್ಯಮಿಗಳು ಮುಂದೆ ಬಂದರೆ ಅವರಿಗೆ ಸರ್ಕಾರ ಸಹಾಯಧನ ಸೇರಿದಂತೆ ಅಗತ್ಯ ನೆರವು ನೀಡಲಿದೆ ಎಂದು ಐಟಿ-ಬಿಟಿ ಸಚಿವ ಪ್ರಿಯಾಂಕ ಖರ್ಗೆ ಪರಿಷತ್‌ನಲ್ಲಿ ತಿಳಿಸಿದ್ದಾರೆ. ವಿಧಾನಪರಿಷತ್‌ನಲ್ಲಿಂದು ಬಿಜೆಪಿ ಸದಸ್ಯ ಎನ್.ರವಿಕುಮಾರ್ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಸೆಮಿಕಂಡಕ್ಟರ್ ಕ್ಷೇತ್ರದಲ್ಲಿ ಕರ್ನಾಟಕ ಇತರೆ ರಾಜ್ಯಗಳಿಗೆ ಹೋಲಿಸಿದರೆ ಸಾಕಷ್ಟು ಮುಂಚೂಣಿಯಲ್ಲಿದೆ. ಯಾವುದೇ ಕಂಪನಿಗಳು ಸೆಮಿಕಂಡಕ್ಟರ್ ಸ್ಥಾಪನೆಗೆ ಮುಂದೆ ಬಂದರೆ ಸರ್ಕಾರ ವಿಶೇಷವಾದ ಆರ್ಥಿಕ ನೆರವು ನೀಡಲಿದೆ ಎಂದು ಹೇಳಿದರು. ಹುಬ್ಬಳ್ಳಿ-ಧಾರವಾಡದಲ್ಲಿ ತಲೆ ಎತ್ತಿರುವ ಅನಧಿಕೃತ ಖಾಸಗಿ ಬಡಾವಣೆಗಳನ್ನು ತೆರವುಗೊಳಿಸಬೇಕೆಂದು ಬಿಜೆಪಿ ಸದಸ್ಯ ಪ್ರದೀಪ್ ಶೆಟ್ಟರ್ ನಗರಾಭಿವೃದ್ಧಿ ಸಚಿವರಿಗೆ ಮನವಿ ಮಾಡಿದರು. ಇದಕ್ಕೆ ಉತ್ತರಿಸಿದ ಸಚಿವ ಸುರೇಶ್ ಗೌಡ, ಈ ಭಾಗದಲ್ಲಿ ಖಾಸಗಿಯವರು ಕಾನೂನು ಬಾಹಿರವಾಗಿ ಇಲಾಖೆಯ ಅನುಮತಿ ಪಡೆಯದೆ ಬಡಾವಣೆ ನಿರ್ಮಿಸಿದ್ದಾರೆ. ತಕ್ಷಣವೇ ಇವುಗಳನ್ನು ತೆರವುಗೊಳಿಸಲು ಸಂಬಂಧಪಟ್ಟ ಅಧಿಕಾರಿಗಳ ಜೊತೆ ಮಾತುಕತೆ ನಡೆಸಲಾಗಿದೆ ಎಂದು ಹೇಳಿದರು.

<><*<><>*><>

ಬೆಂಗಳೂರಿನಿಂದ ಬೆಳಗಾವಿಗೆ ವಂದೇ ಭಾರತ್ ರೈಲು ಸಂಚಾರ ಆರಂಭಿಸುವ ಕುರಿತು ಸಂಬಂಧಪಟ್ಟವರ ಜೊತೆ ಮಾತುಕತೆ ನಡೆಸುವುದಾಗಿ ಕೈಗಾರಿಕೆ ಹಾಗೂ ಮೂಲಭೂತ ಸೌಕರ್ಯಗಳ ಸಚಿವ ಎಂ.ಬಿ.ಪಾಟೀಲ್ ಹೇಳಿದ್ದಾರೆ. ಪರಿಷತ್‌ನಲ್ಲಿ ಉತ್ತರಿಸಿದ ಅವರು, ಕೆಲ ತಾಂತ್ರಿಕ ಕಾರಣಗಳಿಂದ ಇದು ವಿಳಂಬವಾಗಿದೆ. ಸಂಬಂಧಪಟ್ಟವರ ಜೊತೆ ಚರ್ಚಿಸಿ ವಂದೇ ಭಾರತ್ ರೈಲು ಪ್ರಾರಂಭಿಸಲು ಪ್ರಾಮಾಣಿಕ ಪ್ರಯತ್ನ ಮಾಡುವ ಭರವಸೆ ನೀಡಿದರು.

<><*<><>*><>

ಚಿತ್ರದುರ್ಗ ಜಿಲ್ಲೆಯಲ್ಲಿ ದಿನೇ ದಿನೇ ಡೆಂಘಿ ಪ್ರಕರಣಗಳ ಸಂಖ್ಯೆ ಏರಿಕೆಯಾಗುತ್ತಿದ್ದು, ಸೊಳ್ಳೆಗಳ ಉತ್ಪತ್ತಿ ತಾಣ ನಾಶ ಮಾಡಬೇಕು ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಸಲಹೆ ನೀಡಿದ್ದಾರೆ. ಚಿತ್ರದುರ್ಗ ತಾಲ್ಲೂಕಿನ ಮುದ್ದಾಪುರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯ ಮುದ್ದಾಪುರ ಹೊಸಹಟ್ಟಿ ಗ್ರಾಮದಲ್ಲಿ ೨ ಪ್ರಕರಣಗಳು ದೃಢಪಟ್ಟಿದ್ದು, ಡೆಂಘಿ ಹಾಟ್‌ಸ್ಪಾಟ್ ಎಂದು

ಗುರುತಿಸಲಾಗಿದೆ. ಮನೆ ಮನೆ ಭೇಟಿ ಲಾರ್ವಾ ಸಮೀಕ್ಷೆ, ಜ್ವರ ಸಮೀಕ್ಷೆ, ಗುಂಪು ಸಭೆಗಳ ಮೂಲಕ ಅರಿವು ಮೂಡಿಸಲಾಗುತ್ತಿದೆ ಎಂದರು.

**<><*<><>*><>**

೨೦೨೪-೨೫ ನೇ ಸಾಲಿನ ಮುಂಗಾರು ಹಂಗಾಮು ಅವಧಿಗೆ ಗದಗ ಜಿಲ್ಲೆಯಲ್ಲಿ  ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಡಿ ತೋಟಗಾರಿಕೆ ಬೆಳೆಗಳಾದ ನೀರಾವರಿ ಈರುಳ್ಳಿ ಮತ್ತು ಕೆಂಪುಮೆಣಸಿನಕಾಯಿ ಬೆಳೆ ವಿಮೆ ಕಂತು ಪಾವತಿಗೆ ಇದೇ ೩೧ ಕೊನೆಯ ದಿನವಾಗಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ೭.೩೫ ಕ್ಕೆ <><*<>**